ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಜಿಲ್ಲಾ ಸಾಕ್ಷರತಾ ಸಮಿತಿಗಳ ಪುನಶ್ಚೇತನಕ್ಕಾಗಿ ಬೇಲೂರು ಘೋಷಣೆ ಆಧರಿಸಿ ಸರ್ಕಾರವು ಪ್ರತಿ ಗ್ರಾಮ ಪಂಚಾಯತಿಯಿಂದ ರೂ. 25,000–00ಗಳಂತೆ ಸಾಕ್ಷರತಾ ಕಾರ್ಯಕ್ರಮಕ್ಕೆ ಬಳಸಲು ತಿಳಿಸಲಾಗಿದೆ, ಹಾಗೂ ಕೇಂದ್ರ ಸರ್ಕಾರದೊಡನೆ ನಿರಂತರವಾಗಿ ಸಂಪರ್ಕವಿರಿಸಿಕೊಂಡು ಅನುದಾನ ಬಿಡುಗಡೆಗಾಗಿ ಪ್ರಯತ್ನಿಸಲಾಗುತ್ತಿದೆ. ಕಳೆದ ಒಂದು ವರ್ಷದಿಂದ ಇಲ್ಲಿಯವರಗೆ ಸುಮಾರು 14.05 ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, ಈ ಹಣವನ್ನು ಸಮರ್ಪಕವಾಗಿ ವಿನಿಯೋಗಿಸಲಾಗುತ್ತಿದೆ.

1141 (1287) ಶ್ರೀ ಧ್ರುವನಾರಾಯಣ (ಸಂತೇಮರಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಪ್ರೌಢ ಶಿಕ್ಷಣ (ಹೈಸ್ಕೂಲ್ ಹಾಗೂ ಪಿ.ಯು.ಸಿ.)ದಲ್ಲಿ ಚಾಮರಾಜನಗರ ತಾಲ್ಲೂಕು ಹಾಗೂ ಜಿಲ್ಲೆಯಲ್ಲಿ ಶಿಕ್ಷಕರ ಹಾಗೂ ಶಾಲಾ ಕೊಠಡಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬರದಿದೆಯೇ :

ಆ) ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಹೊಸದಾಗಿ ಪ್ರಾರಂಭವಾಗಿರುವ ಪ್ರೌಢ ಶಾಲೆಗಳಿಗೆ ಕೊಠಡಿಗಳ ನಿರ್ಮಾಣವನ್ನು ನಬಾರ್ಡ್ ಆರ್ಥಿಕ ನೆರವಿನ R.I.D.F. ಯೋಜನೆಯಡಿ ಕೈಗೆತ್ತಿಕೊಳ್ಳಲಾಗಿದ್ದು, ಸಧ್ಯ ಈ ವಿಷಯವು ಸಚಿವ ಸಂಪುಟದ ಉಪ ಸಮಿತಿಯ ಅನುಮೋದನೆಗಾಗಿ ಕಾಯಲಾಗುತ್ತಿದೆ. ಅನುಮೋದನೆ ದೊರೆತ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

1143 (1623) ಶ್ರೀ ದಿಗಂಬರ್ ಯಶವಂತರಾವ್ ಪಾಟೀಲ್ (ಖಾನಾಪುರ) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಕಳೆದ ಕೆಲವು ವರ್ಷಗಳಿಂದ ಖಾನಾಪುರ ತಾಲ್ಲೂಕಿನ ಗುಂಡಪಿ ಗ್ರಾಮವನ್ನು ನಂಜನಕೊಡಲ್ ಗ್ರಾಮ ಪಂಚಾಯಿತಿಯಿಂದ ಬೇರ್ಪಡಿಸಿ ಹಲಸಿ ಗ್ರಾಮ ಪಂಚಾಯಿತಿಗೆ ಸೇರಿಸುವ ವಿಚಾರದಲ್ಲಿ ಪ್ರತಿಭಟನೆಯನ್ನು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಆ) ಗುಂಡಪಿ ಗ್ರಾಮದ ಜನರ ಬೇಡಿಕೆಯನ್ನು ಈಡೇರಿಸುವ ವಿಚಾರ ಸರ್ಕಾರಕ್ಕೆ ಇದೆಯೇ : ಇದ್ದಲ್ಲಿ ಸರ್ಕಾರದ ಕ್ರಮಗಳೇನು :

ಇ) ನಂಜನಕೊಡಲ್ ಗ್ರಾಮ ಪಂಚಯಿತಿಯಿಂದ ಗುಂಡಪಿ ಗ್ರಾಮಕ್ಕೆ ಯಾವುದೇ ಮೂಲಭೂತ ಸೌಕರ್ಯಗಳು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಈ) ಹಾಗಿಲ್ಲದಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

ಡಾ॥ ಹೆಚ್.ಸಿ. ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) ಖಾನಾಪುರ ತಾಲ್ಲೂಕಿನ ಗುಂಡಪಿ ಗ್ರಾಮವನ್ನು ನಂಜನಕೊಡಲ್ ಗ್ರಾಮ ಪಂಚಾಯಿತಿಯಿಂದ ಬೇರ್ಪಡಿಸಿ ಹಲಸಿ ಗ್ರಾಮ ಪಂಚಾಯಿತಿಗೆ ಸೇರಿಸುವ ಬಗ್ಗೆ ಜನಪ್ರತಿನಿಧಿಗಳಿಂದ ಹಾಗೂ ಸಾರ್ವಜನಿಕರಿಂದ ಸರ್ಕಾರಕ್ಕೆ ಮನವಿಗಳು ಬಂದಿರುತ್ತವೆ.

ಆ) Delimitation Commission of India ಇವರ ಆದೇಶದಂತೆ ಚುನಾವಣಾ ಕ್ಷೇತ್ರಗಳ ಪುನರ್ವಿಂಗಡಣೆ ಕಾರ್ಯವನ್ನು ಮುಂದೂಡಲಾಗಿದೆ.

ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

1144 (1428) ಶ್ರೀ ಈಶ್ವರಪ್ಪ ಕೆ.ಎಸ್. (ಶಿವಮೊಗ್ಗ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪ್ರಥಮ ದರ್ಜೆ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಆ) ಹಾಗಿದ್ದಲ್ಲಿ, ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಏನು ಕ್ರಮ ಕೈಗೊಂಡಿದೆ ;

ಇ) ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲು ಕೈಗೊಂಡಿರುವ ಕ್ರಮಗಳಾವುವು ?

ಶ್ರೀ ಡಿ. ಮಂಜುನಾಥ್ (ಉನ್ನತ ಸಚಿವರು) :

ಅ) ಬಂದಿದೆ.

ಆ) ಮತ್ತು ಇ) 2005–06ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅವಶ್ಯಕತೆ, ಮೂಲಭೂತ ಸೌಕರ್ಯಗಳ ಲಭ್ಯತೆ ಹಾಗೂ ಇಲಾಖೆಯ ಹಣಕಾಸಿನ ಪರಿಸ್ಥಿತಿಯನ್ನು ಗಮನದಲ್ಲಿರಿಸಿಕೊಂಡು ಈ ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.

1145 (1429) ಶ್ರೀ ಈಶ್ವರಪ್ಪ ಕೆ.ಎಸ್. (ಶಿವಮೊಗ್ಗ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ರಾಜ್ಯದಲ್ಲಿ ಬಡವರಿಗೆ ನಿವೇಶನವಿಲ್ಲದೇ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

ಆ) ಹಾಗಿದ್ದಲ್ಲಿ, ಆಶ್ರಯ ಯೋಜನೆಯಲ್ಲಿ ಇವರಿಗೆ ನಿವೇಶನ ಹಂಚಿಕೆಯ ಕ್ರಮ ಕೈಗೊಳ್ಳಲಾಗುವುದೇ :

ಇ) ಆಶ್ರಯ ಸಮಿತಿಯಲ್ಲಿ ಇರುವ ಸದಸ್ಯರುಗಳು ಯಾರು ?

ಶ್ರೀ ಅಂಜನಮೂರ್ತಿ (ವಸತಿ ಸಚಿವರು) :

ಅ) ಹೌದು.

ಆ) ಹೌದು.

ಇ) ಆಶ್ರಯ ಸಮಿತಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ ವಇ 42 ಹೆಚ್ಎಎಂ 99 ದಿನಾಂಕ 10.05.2000ರ ಪ್ರಕಾರ ಈ ಕೆಳಗಿನವರು ಸದಸ್ಯರಾಗಿರಬೇಕು.